ಜೂನ್ 2023

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್ | ಜಲೋತ್ಸವ ಮನೆ ಮನೆಗೆ ಗಂಗೆ | ಸ್ವಚ್ಛಮೇವ ಜಯತೇ SWACHHA MEVA JAYATE

# ಸ್ವಚ್ಛತಾವಾಣಿ
ವಾರ್ತಾಪತ್ರ

ಸ್ವಚ್ಛ ಸಂಕೀರ್ಣ | ಸ್ವಚ್ಛ ಭಾರತ ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ

## 1. ಇಲಾಖಾ ಸಚಿವರಿಂದ ರಾಜ್ಯ ಮಟ್ಟದ ಕಾರ್ಯಾಗಾರ ಉದ್ಘಾಟನೆ




ವಿಶ್ವ ಬ್ಯಾಂಕ್ ಸಹಯೋಗದಲ್ಲಿ ಬೆಂಗಳೂರಿನಲ್ಲಿ ನಡೆದ ಕರ್ನಾಟಕ ಗ್ರಾಮೀಣ ನೀರು ಸರಬರಾಜು ಸುಸ್ಥಿರ ಯೋಜನೆ, ರಾಜ್ಯ ಮಟ್ಟದ ಒಂದು ದಿನದ ಕಾರ್ಯಾಗಾರವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಐ.ಟಿ/ಬಿ.ಟಿ ಇಲಾಖೆ ಮಾನ್ಯ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರು ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಶ್ರೀ ಎಲ್.ಕೆ ಅತೀಕ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರಾದ ಶ್ರೀ ಗಂಗಾಧರ ಸ್ವಾಮಿ ಜಿ.ಎಂ, ಇಲಾಖೆಯ ಮುಖ್ಯ ಅಭಿಯಂತರರಾದ ಶ್ರೀ ಎಜಾಜ್ ಹುಸೇನ್, ವಿಶ್ವ ಬ್ಯಾಂಕ್‌ನ ಹಿರಿಯ ಅಧಿಕಾರಿಗಳು, ಎಲ್ಲಾ ಜಿಲ್ಲೆಗಳ ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಮುಖ್ಯ ಅಭಿಯಂತರರು, ಭಾಗಿದಾರರು ಉಪಸ್ಥಿತರಿದ್ದರು.

## 2. ಇಲಾಖಾ ಸಚಿವರಿಂದ ಜಿ.ಪಂ. ಸಿ.ಇ.ಓ.ಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಐ.ಟಿ/ಬಿ.ಟಿ ಇಲಾಖೆಯ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ಅವರು ವಿಧಾನಸೌಧದಲ್ಲಿ ಎಲ್ಲಾ ಜಿ.ಪಂ. ಸಿ.ಇ.ಓಗಳೊಂದಿಗೆ ಇಲಾಖೆಯ ಯೋಜನೆಗಳಿಗೆ ಸಂಬಂಧಪಟ್ಟಂತೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.



ಈ ವೇಳೆ ಶ್ರೀ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ಎಲ್. ಕೆ ಅತೀಕ್, ಪಂಚಾಯತ್ ರಾಜ್ ಅಪರ ಮುಖ್ಯಕಾರ್ಯದರ್ಶಿ ಶ್ರೀಮತಿ ಉಮಾ ಮಹಾದೇವನ್, ಪಂಚಾಯತ್ ರಾಜ್ ಇಲಾಖೆಯ ಆಯುಕ್ತರಾದ ಶ್ರೀಮತಿ ಪ್ರಿಯಾಂಕ ಮೇರಿ ಫ್ರಾನ್ಸಿಸ್, ಗ್ರಾಮೀಣಾಭಿವೃದ್ಧಿ ಆಯುಕ್ತರಾದ ಶ್ರೀಮತಿ ಶಿಲ್ಪಾ ನಾಗ್, ಗ್ರಾ.ಕು.ನೀ ಮತ್ತು ನೈ ಆಯುಕ್ತರಾದ ಶ್ರೀ ಗಂಗಾಧರ ಸ್ವಾಮಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ Social audit ನಿರ್ದೇಶಕರಾದ ಶ್ರೀ ನಳಿನಿ ಅತುಲ್ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## 3. ಇಲಾಖೆಯ ಸಚಿವರಿಂದ ಜಲ ಜೀವನ್ ಮಿಷನ್ ಯೋಜನೆಯ ಪ್ರಗತಿ ಪರಿಶೀಲನಾ ಸಭೆ




ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ & ಐ.ಟಿ/ಬಿ.ಟಿ ಇಲಾಖೆಯ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ಅವರು KRIDL ಸಭಾಂಗಣದಲ್ಲಿ ಜಲ ಜೀವನ್ ಮಿಷನ್ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ವೇಳೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ಶ್ರೀ ಎಲ್.ಕೆ.ಅತೀಕ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಆಯುಕ್ತರಾದ ಶ್ರೀ ಗಂಗಾಧರ ಸ್ವಾಮಿ, ಗ್ರಾ.ಕು.ನೀ. ಮತ್ತು ನೈ ಇಲಾಖೆಯ ಮುಖ್ಯ ಅಭಿಯಂತರರಾದ ಶ್ರೀ ಎಜಾಜ್ ಹುಸೇನ್ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.